**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**
**ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು-65**
**ನಾಯನಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ**

**ದಿನಾಂಕ: 13.8.2020**

**ಈ ವಾರದ ಮುನ್ಸೂಚನೆ (13.8.20 ರಿಂದ 17.8.20 ವರೆಗೆ)**

| ನಿಯತಾಂಕಗಳು | 13-08-20 | 14-08-20 | 15-08-20 | 16-08-20 | 17-08-20 |
|---|---|---|---|---|---|
| ಮಳೆ (ಮಿ ಮಿ) | 8.0 | 0.1 | 0.1 | 0.1 | 0.1 |
| ಗರಿಷ್ಠ ಉಷ್ಣಾಂಶ (ಡಿ.ಸೆ.) | 27.3 | 27.4 | 27.9 | 30.6 | 27.7 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 19.1 | 19.3 | 19.2 | 19.5 | 19.4 |
| ಮೋಡ (ಪ್ರಮಾಣ) | 8 | 8 | 8 | 8 | 8 |
| ಆರ್ದ್ರತೆ 7.20 ಬೆ (ಶೇ) | 88 | 84 | 82 | 81 | 84 |
| ಆರ್ದ್ರತೆ 2.20 ಮ (ಶೇ) | 66 | 64 | 58 | 50 | 58 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 24.0 | 22.0 | 24.0 | 24.0 | 23.0 |
| ಗಾಳಿಯ ದಿಕ್ಕು (ಡಿಗ್ರಿ) | 283 | 270 | 248 | 249 | 248 |

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ **ನಾಯನಹಳ್ಳಿ** ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಮೋಡ ಕವಿದ ವಾತಾವರಣವಿದ್ದು, ಹಗುರ ಮಳೆಯಾಗುವ ಸಂಭವವಿದೆ, ದಿನದ **ಗರಿಷ್ಠ ಉಷ್ಣಾಂಶವು 27-30 °C** ಮತ್ತು **ಕನಿಷ್ಠ 19-20 °C** ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 81-88 % ಇದ್ದು, ಮಧ್ಯಾಹ್ನ 50-66 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 22-24 ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

**ಆಶ್ಲೇಷ** ಮಳೆಯು ಕಾಲವು **ಆಗಸ್ಟ್ ತಿಂಗಳ 03 ರಿಂದ ಆಗಸ್ಟ್ ತಿಂಗಳ 16 ರ ವರೆಗೆ** ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು **54.3 ಮಿ.ಮೀ. ವರೆಗೆ ಮಳೆಯಾಗುತ್ತದೆ.**

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

- ಮೋಡಕವಿದ ಮತ್ತು ತುಂತುರು ಮಳೆಯ ಮುನ್ಸೂಚನೆ ಇರುವುದರಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಸಸ್ಯ ಸಂರಕ್ಷಣೆ ಸಿಂಪಡಣೆಗಳನ್ನು ಕೆಲ ದಿನಗಳವರೆಗೆ ಮುಂದೂಡಿ.
- ಕಳೆದ ಒಂದು ತಿಂಗಳಿನಿಂದ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದರಿಂದ ಕೃಷಿ ಹೊಂಡದಲ್ಲಿ ಶೇಕರಣೆಯಾಗಿರುವ ನೀರನ್ನು ಉಪಯೋಗಿಸಿ ಬೆಳೆಗಳಿಗೆ ರಕ್ಷಣಾತ್ಮಕ ನೀರಾವರಿಯನ್ನು ಕೊಡುವುದು ಸೂಕ್ತ.
- ಗಾಳಿಯ ವೇಗವು ಹೆಚ್ಚಾಗಿರುವ್ಯದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ ಸಿಂಪಡಣೆಯನ್ನು ಮುಂದೂಡಿ.
- ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು (ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.

- ದ್ವಿದಳ ಧಾನ್ಯ ಬೆಳೆಗಳನ್ನು ಬಿತ್ತುವ ಮುನ್ನ ಜೈವಿಕ ಗೊಬ್ಬರಗಳಾದ ರೈಜೋಬಿಯಮ್ ನಿಂದ ಬೀಜೋಪಚಾರ ಮಾಡಬೇಕು.
- ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಬೇಕಾದ ಬೆಳೆಗಳು: ತೇವಾಂಶದ ಆಧಾರದ ಮೇಲೆ ಬಿತ್ತನೆ ಮಾಡಬೇಕು

  ಏಕಬೆಳೆ ಪದ್ಧತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ತೊಗರಿ: ಟಿ.ಟಿ.ಬಿ–7, ಬಿ.ಆರ್.ಜಿ–1,2,4 ಮತ್ತು 5

  ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮು ಅವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ರಾಗಿ: ಎಂ.ಆಲ್–365, ಕೆ,ಎಂ.ಆರ್–301 ಮತ್ತು 204, ಜಿ.ಪಿ.ಯು–28 ಮತ್ತು 66<br>
  ನೆಲಗಡಲೆ: ಟಿ.ಎಮ್.ವಿ–2, ಜೆ.ಎಲ್–24, ಕೆ.ಸಿ.ಜಿ–2 ಮತ್ತು 6<br>
  ಶಕ್ತಿಮಾನ್ ಜೋಳದ ತಳಿಗಳಾದ ಡೆಕ್ಕನ್–103, ವಿಜಯ ಕಾಂಪೋಸಿಟ್ ಮತ್ತು ಗಂಗಾ–11<br>
  ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1<br>
  ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ<br>
  ನವಣೆ: ಆರ್.ಎಸ್–118, ಕೆ–221–1,ಪಿ.ಎಸ್–4, ಎಸ್.ಐ.ಎ–326<br>
  ಸಾಮೆ: ಸಿ.ಒ–2, ಪಿ,ಆರ್.ಸಿ–3,ಒ.ಎಲ್.ಎಂ–203<br>
  ಹಾರಕ: ಪಿ.ಎಸ್.ಸಿ–1, ಜೆ.ಎನ್.ಕೆ–364, ಆರ್.ಬಿ.ಕೆ–155, ಜಿ.ಪಿ.ಯು.ಕೆ–3
- ಜಾನುವಾರು: ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.
- ಸಸ್ಯ ಸಂರಕ್ಷಣೆ: ಗಾಳಿಯ ವೇಗವು ಹೆಚ್ಚಾಗಿರುವುದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ ಸಿಂಪಡಣೆಯನ್ನು ಮುಂದೂಡಿ.

**ನೋಡಲ್ ಅಧಿಕಾರಿ:**
**ಕೃಷಿ ಹವಾಮಾನ ವಿಭಾಗ**
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**